# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 07(19). |
| ಸದಸ್ಯರ ಹೆಸರು | : | ಶ್ರೀ ಎನ್.ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 29-01-2021. |
| ಉತ್ತರಿಸುವ ಸಚಿವರು | : | ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು. |

| ಕ್ರ.ಸಂ. | ಪ್ರಶ್ನೆಗಳು | ಉತ್ತರಗಳು |
|---|---|---|
| ಅ. | ಅಲ್ಪಸಂಖ್ಯಾತ ಜನರು ವಾಸಿಸುವ ಪ್ರದೇಶಗಳಲ್ಲಿ ಯಾವ ಯಾವ ಯೋಜನೆಗಳನ್ನು ಅನುಷ್ಠಾನಗೊಳಿಸಬಹುದು ಮತ್ತು ಯೋಜನೆಗಳ ಅನುಷ್ಠಾನಕ್ಕೆ ಇರುವ ಮಾನದಂಡಗಳೇನು; ಈ ಯೋಜನೆಗಳಲ್ಲಿ ಯಾವ ಯಾವ ಕಾಮಗಾರಿಗಳನ್ನು ಮಾಡಬಹುದು; (ಸದರಿ ಯೋಜನೆಗಳಲ್ಲಿ ಕಾಮಗಾರಿಗಳನ್ನು ಅನುಷ್ಠಾನ ಮಾಡಲು ಇರುವ ಸರ್ಕಾರಿ ಸುತ್ತೋಲೆ/ಆದೇಶಗಳನ್ನು ಪ್ರತಿಗಳನ್ನು ನೀಡುವುದು) | ಅಲ್ಪಸಂಖ್ಯಾತರು ಹೆಚ್ಚಾಗಿ ವಾಸಿಸುವ ಪ್ರದೇಶಗಳಲ್ಲಿ ಬೆಂಗಳೂರು ಸೇರಿದಂತೆ ರಾಜ್ಯದ 10 ಮಹಾನಗರ ಪಾಲಿಕೆಗಳಲ್ಲಿ ಅಧಿಸೂಚಿತವಲ್ಲದ ಹಲವಾರು ಕೊಳಗೇರಿ ಪ್ರದೇಶಗಳನ್ನು ಅಭಿವೃದ್ಧಿ ಪಡಿಸುವ ಉದ್ದೇಶಕ್ಕಾಗಿ, 2020-21ನೇ ಸಾಲಿನ ಪರಿಷ್ಕೃತ ಆಯವ್ಯಯದಲ್ಲಿ ರೂ.50.00 ಕೋಟಿಗಳ ಅನುದಾನವನ್ನು ಮೀಸಲಿಡಲಾಗಿದೆ ಸದರಿ ಯೋಜನೆಯಲ್ಲಿ ಈ ಕೆಳಕಂಡ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲಾಗುವುದು.<br>1. ರಸ್ತೆ ಮತ್ತು ಚರಂಡಿ/ಒಳ ಚರಂಡಿ ನಿರ್ವಹಣೆ.<br>2.ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸುವುದು.<br>3.ಅಗತ್ಯವಿದ್ದಲ್ಲಿ ಕೊಳವೆ ಬಾವಿ ಕೊರೆಯುವುದು.<br>4.ಅಗತ್ಯವಿದ್ದಲ್ಲಿ ಸಾಮೂಹಿಕ ಶೌಚಾಲಯಗಳ ನಿರ್ಮಾಣ (ನಿರ್ಮಾಣದ ನಂತರ ನಿರ್ವಹಣೆ ಸ್ಥಳೀಯ ಸಂಸ್ಥೆಗಳ ಸುಪರ್ದಿಗೆ ನೀಡುವುದು.) |
| ಆ. | ಮಂಡ್ಯ ಜಿಲ್ಲಾ ವ್ಯಾಪ್ತಿಯಲ್ಲಿ ಅಲ್ಪಸಂಖ್ಯಾತ ಜನರು ವಾಸಿಸುವ ಪ್ರದೇಶಗಳಲ್ಲಿ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಯಾವ ಯೋಜನೆಗಳನ್ನು ರೂಪಿಸಲಾಗಿದೆ; (ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು.) | ಮಂಡ್ಯ ಜಿಲ್ಲಾ ವ್ಯಾಪ್ತಿಯಲ್ಲಿ ಇಲಾಖೆ ವತಿಯಿಂದ ಅಲ್ಪಸಂಖ್ಯಾತರು ವಾಸಿಸುವ ಪ್ರದೇಶಗಳಲ್ಲಿ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಯಾವ ಯೋಜನೆಯು ಜಾರಿಯಲ್ಲಿರುವುದಿಲ್ಲ. |
| ಇ | ಅಲ್ಪಸಂಖ್ಯಾತರ ಇಲಾಖೆಯಿಂದ ಮಂಡ್ಯ ಜಿಲ್ಲಾ ವ್ಯಾಪ್ತಿಯಲ್ಲಿ ಕಳೆದ ಮೂರು ವರ್ಷಗಳಿಂದ ಅಲ್ಪಸಂಖ್ಯಾತರ ಜನರು ವಾಸಿಸುವ ಪ್ರದೇಶದಲ್ಲಿ ಯಾವ ಯಾವ ಕಾಮಗಾರಿ ಕೈಗೊಳ್ಳಲಾಗಿದೆ? (ಸಂಪೂರ್ಣ ವಿವರ ನೀಡುವುದು.) | ಕಳೆದ ಮೂರು ವರ್ಷಗಳಿಂದ ಮಂಡ್ಯ ಜಿಲ್ಲಾ ವ್ಯಾಪ್ತಿಯಲ್ಲಿ ಮಾನ್ಯ ಮುಖ್ಯ ಮಂತ್ರಿಗಳ ಅಲ್ಪಸಂಖ್ಯಾತರ ಅಭಿವೃದ್ಧಿ ಯೋಜನೆಯಡಿ ಅಲ್ಪಸಂಖ್ಯಾತರು ಜನರು ವಾಸಿಸುವ ಪ್ರದೇಶಗಳಲ್ಲಿ ಈ ಕೆಳಕಂಡ ಕಾಮಗಾರಿಗಳನ್ನು ಕೈಗೊಳ್ಳಲಾಗಿರುತ್ತದೆ.<br>1. ರಸ್ತೆ ಮತ್ತು ಚರಂಡಿ/ಒಳ ಚರಂಡಿ ನಿರ್ವಹಣೆ.<br>2. ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸುವುದು.<br>3. ಅಗತ್ಯವಿದ್ದಲ್ಲಿ ಕೊಳವೆ ಬಾವಿ ಕೊರೆಯುವುದು.<br>4.ಅಗತ್ಯವಿದ್ದಲ್ಲಿ ಸಾಮೂಹಿಕ ಶೌಚಾಲಯಗಳ ನಿರ್ಮಾಣ (ನಿರ್ಮಾಣದ ನಂತರ ನಿರ್ವಹಣೆ ಸ್ಥಳೀಯ ಸಂಸ್ಥೆಗಳ ಸುಪರ್ದಿಗೆ ನೀಡುವುದು.) |

**ಸಂಖ್ಯೆ: MWD 02 LMQ 2021**

(ಶ್ರೀಮಂತ ಬಾಳಾಸಾಹೇಬ ಪಾಟೀಲ್)
ಕೈಮಗ್ಗ, ಜವಳಿ ಹಾಗೂ ಅಲ್ಪಸಂಖ್ಯಾತರ
ಕಲ್ಯಾಣ ಸಚಿವರು